**ಹಾಸ್ಟೆಲ್ ಮತ್ತು ವಸತಿನಿಲಯದಡಿ (ಕ್ರೈಸ್) ಮೀಸಲಾತಿ ಕೋರಿರುವ ಅಭ್ಯರ್ಥಿಗಳಿಗೆ ವಿಶೇಷ ಸೂಚನೆ:-**

1. ಸರ್ಕಾರಿ ಹಾಸ್ಟಲ್‌ನಲ್ಲಿ ವ್ಯಾಸಂಗ ಮಾಡಿರುವ ಸಂಬಂಧ ಮೀಸಲಾತಿ ಕೋರಿ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಕಡ್ಡಾಯವಾಗಿ 3 ವರ್ಷಗಳು ಹಾಸ್ಟೆಲ್‌ನಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧ ಪಟ್ಟ ಹಾಸ್ಟೆಲ್‌ನ ವಾರ್ಡನ್‌ರಿಂದ ದೃಢೀಕರಣ ಪತ್ರ ಪಡೆದು ಮೂಲ ದೃಢೀಕರಣ ಪತ್ರವನ್ನು ಕೌನ್ಸಿಲಿಂಗ್ ಸಮಯದಲ್ಲಿ ಕಡ್ಡಾಯವಾಗಿ ಹಾಜರು ಪಡಿಸುವುದು, ಇಲ್ಲವಾದಲ್ಲಿ ಅಂತಹ ಅಭ್ಯರ್ಥಿಗಳ ಆಯ್ಕೆಯನ್ನು ರದ್ದುಗೊಳಿಸಲಾಗುವುದು.
2. ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿರುವ ವಸತಿ ಶಾಲೆಗಳಲ್ಲಿ (ಕ್ರೈಸ್) ವ್ಯಾಸಂಗ ಮಾಡಿರುವ ಸಂಬಂಧ ಮೀಸಲಾತಿ ಕೋರಿ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಕಡ್ಡಾಯವಾಗಿ 5 ವರ್ಷಗಳು ವಸತಿ ಶಾಲೆಯಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧ ಪಟ್ಟ ವಸತಿ ಶಾಲೆಯ ಪ್ರಾಂಶುಪಾಲರಿಂದ ದೃಢೀಕರಣ ಪತ್ರ ಪಡೆದು ಮೂಲ ದೃಢೀಕರಣ ಪತ್ರವನ್ನು ಕೌನ್ಸಿಲಿಂಗ್ ಸಮಯದಲ್ಲಿ ಕಡ್ಡಾಯವಾಗಿ ಹಾಜರು ಪಡಿಸುವುದು, ಇಲ್ಲವಾದಲ್ಲಿ ಅಂತಹ ಅಭ್ಯರ್ಥಿಗಳ ಆಯ್ಕೆಯನ್ನು ರದ್ದುಗೊಳಿಸಲಾಗುವುದು.
3. ಹಾಸ್ಟೆಲ್ / ವಸತಿ ಶಾಲೆಗಳಲ್ಲಿ ವ್ಯಾಸಂಗ ಮಾಡಿರುವ ಸಂಬಂಧ ಮೀಸಲಾತಿ ಕೋರಿರುವ ಅಭ್ಯರ್ಥಿಗಳು ಸಲ್ಲಿಸುವ ದೃಢೀಕರಣ ಪತ್ರವನ್ನು ಇಲಾಖಾವತಿಯಿಂದ ಪರಿಶೀಲಿಸಿ ಖಚಿತ ಪಡಿಸಿಕೊಂಡ ನಂತರವೇ ಅಭ್ಯರ್ಥಿಗಳಿಗೆ ಆಯ್ಕೆ ಪತ್ರವನ್ನು ನೀಡಲಾಗುವುದು.